ಬೇಲೂರಿನ ಕಂಬೈಂಡ್ ಆಸ್ಪತ್ರೆಯನ್ನು ಜನರಲ್ ಆಸ್ಪತ್ರೆಯನ್ನಾಗಿ ಪರಿವರ್ತನೆ

1174 - ಶ್ರೀ ಬಿ.ಹೆಚ್. ಲಕ್ಷ್ಮಣಯ್ಯ (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೇಲೂರಿನ ಕಂಬೈಂಡ್ ಡಿಸ್ಪೆನ್ಸರಿ ಆಸ್ಪತ್ರೆಯನ್ನು ಜನರಲ್ ಆಸ್ಪತ್ರೆಯಾಗಿ ಪರಿವರ್ತಿಸಲು 10 ವರ್ಷಗಳ ಹಿಂದೆಯೇ ಸರ್ಕಾರ ತೀರ್ಮಾನ ತೆಗೆದುಕೊಂಡಿರಲಿಲ್ಲವೇ?*

ಆ) *ಇದರ ಅಂಗವಾಗಿ ಖಾಸಗಿ ಗಣ್ಯರೊಬ್ಬರು ಜನರಲ್‌ಆಸ್ಪತ್ರೆ ಕಟ್ಟಡ ಕಟ್ಟಲು ಮುಂದೆ ಬಂದು ಕಟ್ಟಡ ಪೂರ್ಣವಾಗಿ ಕೆಲವು ವರ್ಷಗಳೇ ಕಳೆದಿದ್ದರೂ ಜನರಲ್ ಆಸ್ಪತ್ರೆಯಂದು ಪರಿವರ್ತಿಸಲು ಸಾಧ್ಯವಾಗದಿರುವುದಕ್ಕೆ ಸರ್ಕಾರಕ್ಕೆ ಇದ್ದ ಪ್ರಬಲ ಕಾರಣಗಳೇನು?*

ಇ) *ಕಳೆದ ಒಂದು ವರ್ಷದಿಂದ ಜನರಲ್ ಆಸ್ಪತ್ರೆಯಾಗಿ ಬದಲಾವಣೆ ಮಾಡಬೇಕೆಂದು ಒತ್ತಾಯಿಸುತ್ತಾ ಬಂದಿದ್ದರೂ ಸರ್ಕಾರ ಜನರಲ್ ಆಸ್ಪತ್ರೆಯೆಂದು ಪರಿವರ್ತಿಸಲು ನಿಧಾನಿಸಿರುವುದೇಕೆ?*

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಸಚಿವರು)

ಅ) 1983 ರಲ್ಲಿ ಜನರಲ್ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಯಿತು

ಆ) ಕಟ್ಟಡದ ಕೆಲಸ ಪೂರ್ತಿಯಾಗಿದೆ. ಸಿಬ್ಬಂದಿ ಮತ್ತಿತರ ಸೌಲಭ್ಯಗಳನ್ನು ಒದಗಿಸುವ ವಿಚಾರ ಪರಿಶೀಲನೆಯಲ್ಲಿದೆ.

ಇ) ಇನ್ನೂ ಪರಿಶೀಲನೆಯಲ್ಲಿದೆ.

ಹರಪನಹಳ್ಳಿ ತಾಲ್ಲೂಕನ್ನು ಬರಗಾಲದ ಪ್ರದೇಶವೆಂದು ಘೋಷಣೆ

1149 - ಶ್ರೀ ಬಿ.ಹೆಚ್. ಯಂಕಾನಾಯಕ್ (ಹರಪನಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹರಪನಹಳ್ಳಿ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲು ಕ್ರಮ ಕೈಗೊಳ್ಳಲಾಗುವುದೆ?*

ಆ) *ಹಾಗಿದ್ದಲ್ಲಿ ಅಭಿವೃದ್ಧಿ ಕಾಮಗಾರಿ ಕಾರ್ಯಗಳನ್ನು ಮಾಡಲಾಗುವುದೆ?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಬಳ್ಳಾರಿ ಜಿಲ್ಲೆಯ ಪ್ರೌಢ ಶಾಲೆಗಳ ಸಿಬ್ಬಂದಿ ವೇತನ

1226 - ಶ್ರೀ ಬಿ.ಹೆಚ್.ಯಂಕಾನಾಯಕ್ (ಹರಪನಹಳ್ಳಿ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಳ್ಳಾರಿ ಜಿಲ್ಲೆಯ ಯೋಜನೆಯಡಿ ಬರುವ 31 ಪ್ರೌಢ ಶಾಲೆಗಳ ಸಿಬ್ಬಂದಿ ವರ್ಗದ ವೇತನ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಇದನ್ನು ಬಿಡುಗಡೆ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?*

ಇ) *ಸಂಕಷ್ಟದಲ್ಲಿರುವ ನೌಕರರ ವೇತನ ಬಿಡುಗಡೆ ಮಾಡಿ ಅವರ ಜೀವನವನ್ನು ಉತ್ತಮಗೊಳಿಸುವರೆ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು)

ಅ) ಹೌದು

ಆ) ಹೌದು. ಈಗಾಗಲೇ ಇಡಿ 27 ಬಿಸಿಎಫ್ 90 ದಿನಾಂಕ 1-3-91 ರಲ್ಲಿ ಯೋಜನೆ ಅಡಿಯಲ್ಲಿ 30 ಲಕ್ಷ ಅನುದಾನವನ್ನು ಬಿಡುಗಡೆ ಮಾಡಿದೆ.

ಇ) ಸರಕಾರಿ ಆದೇಶದಂತೆ ನೌಕರರ ವೇತನವನ್ನು ಬಿಡುಗಡೆ ಮಾಡಲಾಗುವುದು.

ರಾಜ್ಯದ ಪ್ರಾಥಮಿಕ ಶಿಕ್ಷಕರಿಗೆ ಕನ್ನಡ ಪಂಡಿತ ತರಬೇತಿಗೆ ನಿಯೋಜನೆ

1136 - ಶ್ರೀ ಹರ್ಷಕುಮಾರ್ ಗೌಡ (ಚಾಮರಾಜ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 4 ವರ್ಷ ಕನ್ನಡ ಪಂಡಿತ ತರಬೇತಿಗೆ ನಿಯೋಜನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ತರಬೇತಿ ಹೊಂದಿದ ಶಿಕ್ಷಕರಿಗೆ 1982ರಿಂದ ಮುಂಬಡ್ತಿ ನೀಡಲಾಗುತ್ತಿದೆಯೇ? ಹಾಗೂ ನೀಡದಿದ್ದಲ್ಲಿ ಕಾರಣಗಳೇನು?

ಇ) ಈ ಉದ್ದೇಶಕ್ಕಾಗಿ ಕನ್ನಡ ಪಂಡಿತ ತರಬೇತಿಗಾಗಿ ಒಂದು ವರ್ಷ ಸರ್ಕಾರ ಖರ್ಚು ಮಾಡುತ್ತಿರುವ ಹಣವೆಷ್ಟು?

ಈ) ಈ ಕನ್ನಡ ಪಂಡಿತ ತರಬೇತಿ ಜೊತೆ ಬಿ.ಇಡಿ. ಶಿಕ್ಷಣ ಪಡೆದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮುಂಬಡ್ತಿ ನೀಡಲಾಗುತ್ತಿದೆಯೇ ? ನೀಡುತ್ತಿದ್ದರೆ ಯಾವ ಆಧಾರದ ಮೇಲೆ ನೀಡಲಾಗುತ್ತಿದೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು)

ಅ) ಬಂದಿವೆ.

ಆ) ಇಲ್ಲ.

1982ರ ಪರಿಷ್ಕೃತ ಹುದ್ದೆ ಮತ್ತು ನೇಮಕಾತಿ ನಿಯಮದಂತೆ ಬಿ.ಇಡಿ. ತರಬೇತಿ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ಬಡ್ತಿ ನೀಡಲು ಅವಕಾಶವಿರುವುದಿಲ್ಲ.

ಇ) ರೂ. 4,93,500

ಈ) ಕನ್ನಡ ಪಂಡಿತ ಮತ್ತು ಬಿ.ಇಡಿ. ಪದವಿ ಪಡೆದ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ವಿದ್ಯಾರ್ಹತೆ ಮತ್ತು ಸೇವಾ ಜೇಷ್ಠತೆಯ ಆಧಾರದ ಮೇಲೆ ಬಡ್ತಿಯನ್ನು ನೀಡಲು ಅವಕಾಶವಿದೆ.

ಸರ್ಕಾರಿ ಪ್ರಥಮ ದರ್ಜೆಯ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಚಾರ್ಯರ ಮತ್ತು ಉಪನ್ಯಾಸಕರ ಹುದ್ದೆಗಳು

1172 - ಶ್ರೀ ಬಿ.ಹೆಚ್. ಬನ್ನಿಕೋಡ್ (ಹಿರೇಕೆರೂರು) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆಯ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಚಾರ್ಯರ ಹುದ್ದೆಗಳ ಸಂಖ್ಯೆ ಎಷ್ಟು?

ಆ) ರಾಜ್ಯದಲ್ಲಿ ಖಾಲಿಯಿರುವ ಸರ್ಕಾರಿ ಪ್ರಥಮ ದರ್ಜೆಯ ಕಾಲೇಜು ಉಪನ್ಯಾಸಕರ ಸಂಖ್ಯೆ ಎಷ್ಟು?

ಇ) ಖಾಲಿಯಿರುವ ಉಪನ್ಯಾಸಕರ ಹಾಗೂ ಪ್ರಾಚಾರ್ಯರ ಹುದ್ದೆಗಳನ್ನು ತುಂಬಲು ಸರ್ಕಾರ ಯೋಚಿಸಿದೆಯೆ?

ಈ) ಹಾಗಿದ್ದಲ್ಲಿ ಸರ್ಕಾರದ ನೀತಿ ಹಾಗೂ ಕ್ರಮ ಏನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು)

ಅ) ಕಾಲೇಜು ಶಿಕ್ಷಣ ಇಲಾಖೆಯ ವ್ಯಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾಚಾರ್ಯರ (ಪ್ರಿನ್ಸಿಪಾಲರ) ಪ್ರತ್ಯೇಕ